ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ : ಎಡಿಎಂ.3(3)HRC: 5768/ B3 /16-17 ದಿನಾಂಕ: 27-06-2016

**ಸುತ್ತೋಲೆ**

ವಿಷಯ: ಆಧಾರ್ ಕಾರ್ಡ್ ಹೊಂದದ ವಿದ್ಯಾರ್ಥಿಗಳಿಗೆ ಶಾಲೆಗಳಲ್ಲಿ ಪರೀಕ್ಷೆ ಅಥವಾ ಪ್ರವೇಶ ನಿರಾಕರಿಸುತ್ತಿರುವ ಬಗ್ಗೆ.

ಉಲ್ಲೇಖ: 1. ರಾಜ್ಯ ಮಾನವ ಹಕ್ಕುಗಳ ಆಯೋಗದ ಪತ್ರ ಸಂಖ್ಯೆ: ಮಾ.ಹ.ಆ. 5768/10/31/2015(B-3) ದಿನಾಂಕ: 03.06.2016

- - - - -

ರಾಜ್ಯ ಸರ್ಕಾರಿ / ಖಾಸಗಿ / ಅನುದಾನಿತ / ಅನುದಾನ ರಹಿತ ಶಾಲೆಗಳಲ್ಲಿ ಆಧಾರ್ ಕಾರ್ಡ್ ಹೊಂದಿಲ್ಲದಿರುವ ನೆಪವೊಡ್ಡಿ ಪರೀಕ್ಷೆಗಳನ್ನು ತೆಗೆದುಕೊಳ್ಳದಂತೆ ಅಥವಾ ದಾಖಲಾತಿಯನ್ನು ತಡೆಹಿಡಿಯುತ್ತಿರುವಂತ ಪ್ರಕರಣಗಳು ವರದಿಯಾಗುತ್ತಿರುವುದಾಗಿ ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಒಂದು ವೇಳೆ ಇಂತಹ ಪ್ರಕರಣಗಳಿದ್ದಲ್ಲಿ ಯಾವುದೇ ಕಾರಣಕ್ಕಾಗಿ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ಅಥವಾ ದಾಖಲಾತಿಯನ್ನು ನಿರಾಕರಿಸದಂತೆ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲೆಗಳಿಗೆ ಕಟ್ಟುನಿಟ್ಟಿನ ಸೂಚನೆಯನ್ನು ನೀಡಲು ಸೂಚಿಸಿದೆ. ಒಂದು ವೇಳೆ ಇಂತಹ ಪ್ರಕರಣಗಳು ದಾಖಲಾದಲ್ಲಿ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರನ್ನೇ ನೇರ ಹೊಣೆಗಾರರನ್ನಾಗಿಸಲಾಗುವುದು.

(ಕೆ.ಆನಂದ)
ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

ಪ್ರತಿ:

1) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ.